ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ, ದಿನಾಂಕ: 18ನೇ ಜುಲೈ, 2019

ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳು ಪ್ರಾರಂಭಿಸುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):-

323 (542) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಅರ್ಜಿಗಳನ್ನು ಸ್ವೀಕರಿಸಿ ನಿಗಮಗಳಲ್ಲಿ ಬಾಕಿ ಉಳಿಸಿಕೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಭೂಮಿಯನ್ನು ಪಡೆದು ಎಷ್ಟು ವರ್ಷಗಳಿಂದ ನಿರುಪಯುಕ್ತವಾಗಿ ಇಟ್ಟುಕೊಂಡಿದ್ದಾರೆ; ಅಂತಹ ಫಲಾನುಭವಿಗಳ ಸಂಖ್ಯೆ ಎಷ್ಟು; (ಹೆಸರು ವಿಳಾಸದೊಂದಿಗೆ ವಿವರ ನೀಡುವುದು)

(ಇ) ಜಾಗತಿಕ ಮಟ್ಟದ ಟೆಂಡರ್ ಕರೆಯುವ ಪದ್ಧತಿಯಿಂದಾಗಿ ಸ್ಥಳೀಯ ಸಣ್ಣ ಕೈಗಾರಿಕೆಗಳು ನೇಪಥ್ಯಕ್ಕೆ ಸಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸಣ್ಣ ಕೈಗಾರಿಕೆಗಳಿಗೆ ಸಬ್ಸಿಡಿ ದೊರೆಯುವಲ್ಲೂ ನಿಧಾನವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಉ) ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ಹಮ್ಮಿಕೊಂಡಿರುವ ನೂತನ ಯೋಜನೆಗಳಾವುವು? (ಮಾಹಿತಿ ನೀಡುವುದು)